**All India Radio: Bangalore**
**National Bulletin In Kannada**
**19.05.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**19.05.2026 07.35 a.m.**
**<><><><>**

ಮುಖ್ಯಾಂಶಗಳು

1. ಭಾರತ - ನಾರ್ವೆ ವ್ಯಾಪಾರ - ಸಂಶೋಧನಾ ಶೃಂಗಸಭೆ ನವೋದ್ಯಮ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಭಾರತದಲ್ಲಿ ಹೂಡಿಕೆಗೆ ವಿಪುಲ ಅವಕಾಶ - ಪ್ರಧಾನಿ ನರೇಂದ್ರ ಮೋದಿ
2. ಆಪರೇಷನ್ ಸಿಂಧೂರ್ ಕಾರ್ಯಚರಣೆಯು ಭಾರತವನ್ನು ಆತ್ಮವಿಶ್ವಾಸ ಮತ್ತು ಸಮರ್ಥ ರಾಷ್ಟ್ರವಾಗಿ ಪರಿವರ್ತಿಸಿದೆ - ಸಚಿವ ರಾಜನಾಥ್ ಸಿಂಗ್
3. ಕೊಲ್ಲಿ ರಾಷ್ಟ್ರಗಳ ನಾಯಕರ ಮನವಿ ಮೇರೆಗೆ ಇರಾನ್ ಮೇಲಿನ ಯೋಜಿತ ದಾಳಿ ತಡೆಹಿಡಿಯಲಾಗಿದೆ ; ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್
4. ಐಪಿಎಲ್ ಟಿ-೨೦ ಕ್ರಿಕೆಟ್ ; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಗೆದ್ದಸನ್ ರೈಸರ್ಸ್ ಹೈದರಾಬಾದ್ ತಂಡ ಪ್ಲೇಆಫ್ ಪ್ರವೇಶ

<><><><>

ವಿದೇಶಿ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಓಸ್ಲೋದಲ್ಲಿ ನಿನ್ನೆ ನಡೆದ ಭಾರತ-ನಾರ್ವೆ ವ್ಯಾಪಾರ ಮತ್ತು ಸಂಶೋಧನಾ ಶೃಂಗಸಭೆಯಲ್ಲಿ ಪಾಲ್ಗೊಂಡಿದ್ದರು. ಈ ವೇಳೆ ರಾಜಕುಮಾರ ಹಾಕಾನ್ ಮತ್ತು ನಾರ್ವೆಯ ಪ್ರಧಾನಿ ಜೋನಾಸ್ ಗಹ್ರ್ ಸ್ಟೋರ್ ಕೂಡ ಶೃಂಗಸಭೆಯಲ್ಲಿ ಭಾಗವಹಿಸಿದ್ದರು. ಶೃಂಗವನ್ನುದ್ದೇಶಿಸಿ ಮಾತನಾಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ, ವ್ಯಾಪಾರ ಮತ್ತು ಆರ್ಥಿಕ ಪಾಲುದಾರಿಕೆ ಒಪ್ಪಂದ, ಟಿಇಪಿಎ ಜಾರಿಗೆ ಬಂದ ತರುವಾಯ ದ್ವಿಪಕ್ಷೀಯ ವಾಣಿಜ್ಯ ಮತ್ತು ಹೂಡಿಕೆಯ ಬೆಳವಣಿಗೆಯನ್ನು ಶ್ಲಾಘಿಸಿದರು. ಟಿಇಪಿಎ ಅಡಿಯಲ್ಲಿ ೧೦೦ ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆಯ ಗುರಿಯನ್ನು ಸಾಧಿಸಲು ಮತ್ತು ಅದರ ಪರಿಣಾಮವಾಗಿ ಭಾರತದಲ್ಲಿ ಒಂದು ದಶಲಕ್ಷ ಉದ್ಯೋಗಗಳ ಸೃಷ್ಟಿಗೆ ಎರಡೂ ಕಡೆಯ ಪಾಲುದಾರರು ಪ್ರಯತ್ನಗಳನ್ನು ಮಾಡಬೇಕು ಎಂದು ಅವರು ಒತ್ತಿ ಹೇಳಿದರು. ಭಾರತದ ಬಲವಾದ ಬೆಳವಣಿಗೆಯ ಪಥ, ಜನಸಂಖ್ಯಾ ಲಾಭಾಂಶ, ಪ್ರತಿಭಾವಂತ ಮತ್ತು ಮಹತ್ವಾಕಾಂಕ್ಷೆಯ ಯುವಕರು, ದೃಢವಾದ ವ್ಯಾಪಾರ ಅಭ್ಯಾಸಗಳು, ಹೂಡಿಕೆದಾರ ಸ್ನೇಹಿ ನಿಯಂತ್ರಕ ಚೌಕಟ್ಟು ಮತ್ತು ಸ್ಪರ್ಧಾತ್ಮಕ ಒಕ್ಕೂಟ ವ್ಯವಸ್ಥೆಯ ಮನೋಭಾವವನ್ನು ಅವರು ಬಿಂಬಿಸಿದರು. ನೀಲಿ ಆರ್ಥಿಕತೆ, ಹಡಗು ನಿರ್ಮಾಣ, ಹಸಿರು ಪರಿವರ್ತನೆ, ನವೀಕರಿಸಬಹುದಾದ ಇಂಧನ, ಆರೋಗ್ಯ-ತಂತ್ರಜ್ಞಾನ, ನಿರ್ಣಾಯಕ ಖನಿಜಗಳು ಮತ್ತು ನವೋದ್ಯಮಗಳಂತಹ ಪ್ರಮುಖ ಕ್ಷೇತ್ರಗಳಲ್ಲಿ ಹೂಡಿಕೆ ಮಾಡಲು ಭಾರತದಲ್ಲಿ ವಿಪುಲ ಅವಕಾಶಗಳಿವೆ ಎಂದು ನಾರ್ವೆ ಹೂಡಿಕೆದಾರರಿಗೆ ಮನವರಿಕೆ ಮಾಡಿಕೊಟ್ಟರು. ದೇಶದ ಪ್ರಮಾಣ, ಹೆಚ್ಚುತ್ತಿರುವ ಇಂಧನ ಬೇಡಿಕೆಗಳು, ಹವಾಮಾನ ಬದ್ಧತೆಗಳು ಮತ್ತು ನವೀಕರಿಸಬಹುದಾದ ಇಂಧನ, ಗ್ರಿಡ್ ಮೂಲಸೌಕರ್ಯ, ಹಸಿರು ಹೈಡ್ರೋಜನ್ ಮತ್ತು ಶುದ್ಧ ಇಂಧನದಲ್ಲಿ ತ್ವರಿತ ವಿಸ್ತರಣೆಯನ್ನು ಒತ್ತಿಹೇಳಿದ ಪ್ರಧಾನಿ ನರೇಂದ್ರ ಮೋದಿ, ಭಾರತದ ಮಹತ್ವಾಕಾಂಕ್ಷೆಯ ಹಸಿರು ಪರಿವರ್ತನೆಯ ಕಾರ್ಯಸೂಚಿಯನ್ನು ಒತ್ತಿಹೇಳಿದರು. ಶುದ್ಧ ಇಂಧನ ಹೂಡಿಕೆಗಳು, ಕಡಲ ವಲಯದ ಡಿಕಾರ್ಬೊನೈಸೇಶನ್, ಸಾಗರ ಸುಸ್ಥಿರತೆ ಮತ್ತು ಹವಾಮಾನ ಹಣಕಾಸು ಕ್ಷೇತ್ರದಲ್ಲಿ ನಾರ್ವೆಯ ಜಾಗತಿಕ ನಾಯಕತ್ವವನ್ನು ಅವರು ಶ್ಲಾಘಿಸಿದರು.

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಆಪರೇಷನ್ ಸಿಂಧೂರ್ ಕಾರ್ಯಾಚರಣೆಯು ಭಾರತವನ್ನು ಬಲವಾದ, ಆತ್ಮವಿಶ್ವಾಸದ ಮತ್ತು ಸಮರ್ಥ ರಾಷ್ಟ್ರವಾಗಿ ಪರಿವರ್ತಿಸಲು ಸಾಕ್ಷಿಯಾಗಿದೆ ಎಂದು ಬಣ್ಣಿಸಿದ್ದಾರೆ. ಹನೋಯ್ ನಲ್ಲಿ ನಿನ್ನೆ ಭಾರತೀಯ ವಲಸಿಗರನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತವು ಮೊದಲು ಬಳಸದಿರುವ ನೀತಿಗೆ ಬದ್ಧವಾಗಿದ್ದರೂ, ಪರಮಾಣು ಬ್ಲ್ಯಾಕ್ ಮೇಲ್ ಗೆ ಮಣಿಯುವುದಿಲ್ಲ ಮತ್ತು ಯಾವುದೇ ಶತ್ರುಗಳ ದುಸ್ಸಾಹಸಕ್ಕೆ ದೃಢವಾಗಿ ಪ್ರತಿಕ್ರಿಯಿಸಲು ಸಿದ್ಧವಾಗಿದೆ ಎಂದು ಪ್ರತಿಪಾದಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಸಾಧಿಸಿದ ಅಭೂತಪೂರ್ವ ಪ್ರಗತಿಯಿಂದಾಗಿ ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಭಾರತದ ಹೆಚ್ಚುತ್ತಿರುವ ಸ್ಥಾನಮಾನವನ್ನು ಅವರು ಬಿಂಬಿಸಿದರು. ಸೆಮಿಕಂಡಕ್ಟರ್ ವಲಯದಲ್ಲಿ ಭಾರತವು ವೇಗವಾಗಿ ಮುನ್ನಡೆಯುತ್ತಿದೆ ಎಂದು ಒತ್ತಿ ಹೇಳಿದ ಸಚಿವರು, ಇದು ಕೇವಲ ತಾಂತ್ರಿಕ ಪ್ರಗತಿಯ ಕಥೆಯಲ್ಲ, ನವ ಭಾರತದ ಕಥೆಯೂ ಆಗಿದೆ ಎಂದು ಅವರು ಹೇಳಿದರು. ಜಾಗತಿಕ ಶಾಂತಿ, ಹಂಚಿಕೆಯ ಬೆಳವಣಿಗೆ ಮತ್ತು ಸಮೃದ್ಧಿಗಾಗಿ ಭಾರತದೊಂದಿಗೆ ಪಾಲುದಾರರಾಗಲು ಸಚಿವರು ಅಂತಾರಾಷ್ಟ್ರೀಯ ಸಮುದಾಯವನ್ನು ಆಹ್ವಾನಿಸಿದರು. ಹಾಗೆಯೇ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವಂತೆ ಭಾರತೀಯ ವಲಸಿಗರನ್ನು ಒತ್ತಾಯಿಸಿದರು.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಛತ್ತೀಸ್ ಗಢದ ಬಸ್ತಾರ್ ವಿಭಾಗೀಯ ಕೇಂದ್ರ ಕಚೇರಿ ಜಗದಾಲ್ಪುರದಲ್ಲಿ ಕೇಂದ್ರ ವಲಯ ಮಂಡಳಿಯ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಯಲ್ಲಿ ಛತ್ತೀಸ್ ಗಢ, ಮಧ್ಯಪ್ರದೇಶ, ಉತ್ತರ ಪ್ರದೇಶ ಮತ್ತು ಉತ್ತರಾಖಂಡದ ಮುಖ್ಯಮಂತ್ರಿಗಳು ಮತ್ತು ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ನಿನ್ನೆ ಛತ್ತೀಸ್ ಗಢಕ್ಕೆ ಭೇಟಿ ನೀಡಿದ ಅಮಿತ್ ಶಾ ಅವರು ಬಸ್ತಾರ್ ಜಿಲ್ಲೆಯ ನೇತನಾರ್ ಗ್ರಾಮದಲ್ಲಿ ಸಾರ್ವಜನಿಕ ಸೇವಾ ಕೇಂದ್ರವನ್ನು ಉದ್ಘಾಟಿಸಿದರು.

<><><><>

ಕೋಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ವಿರುದ್ಧ ಕಾನೂನು ಕ್ರಮ ಜರುಗಿಸಲು ಪಶ್ಚಿಮ ಬಂಗಾಳ ಸರ್ಕಾರ ಔಪಚಾರಿಕ ಅನುಮತಿ ನೀಡಿದೆ. ಅಖ್ತರ್ ಅಲಿ ವರ್ಸಸ್ ಪಶ್ಚಿಮ ಬಂಗಾಳ ರಾಜ್ಯ ಮತ್ತು ಇತರರ ಪ್ರಕರಣದಲ್ಲಿ ೨೦೨೪ ರ ಆಗಸ್ಟ್ ೨೩ ರಂದು ಕೋಲ್ಕತ್ತಾ ಹೈಕೋರ್ಟ್ ನೀಡಿದ ಆದೇಶದ ನಂತರ ಈ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಸಿಬಿಐನ ಭ್ರಷ್ಟಾಚಾರ ನಿಗ್ರಹ

ಘಟಕವು ೨೦೨೪ ರ ಆಗಸ್ಟ್ ೨೪ ರಂದು ನಿಯಮಿತ ಪ್ರಕರಣವನ್ನು ದಾಖಲಿಸಿತ್ತು. ಸಂದೀಪ್ ಘೋಷ್ ಮತ್ತು ಇತರ ಮೂರು ಸಂಸ್ಥೆಗಳನ್ನು ಒಳಗೊಂಡ ಆರ್.ಜಿ.ಕಾರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ವಿವಿಧ ಖರೀದಿ ಮತ್ತು ಸಂಬಂಧಿತ ವಿಷಯಗಳಲ್ಲಿ ಆರ್ಥಿಕ ಅಕ್ರಮಗಳು ನಡೆದಿವೆ ಎಂದು ತನಿಖೆ ನಡೆಸಲಾಗಿದೆ.

<><><>

ಕತಾರ್, ಸೌದಿ ಅರೇಬಿಯಾ ಮತ್ತು ಯುಎಇ ನಾಯಕರ ಮನವಿಯ ಮೇರೆಗೆ ಇರಾನ್ ಮೇಲೆ ಯೋಜಿತ ಮಿಲಿಟರಿ ದಾಳಿಯನ್ನು ತಡೆ ಹಿಡಿದಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಟ್ರೂತ್ ಸೋಷಿಯಲ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಅಮೆರಿಕ ಅಧ್ಯಕ್ಷ ಟ್ರಂಪ್, ಕತಾರ್ ನ ಅಮೀರ್ ತಮೀಮ್ ಬಿನ್ ಹಮದ್ ಅಲ್ ಥಾನಿ, ಸೌದಿ ಯುವರಾಜ ಮೊಹಮ್ಮದ್ ಬಿನ್ ಸಲ್ಮಾನ್ ಅಲ್ ಸೌದ್ ಮತ್ತು ಯುಎಇ ಅಧ್ಯಕ್ಷ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರು ಮಂಗಳವಾರ ನಿಗದಿಯಾಗಿದ್ದ ದಾಳಿಯನ್ನು ಮುಂದೂಡುವಂತೆ ಕೇಳಿಕೊಂಡಿದ್ದಾರೆ ಎಂದು ಹೇಳಿದ್ದಾರೆ. ಅಮೆರಿಕ ಮತ್ತು ಪಶ್ಚಿಮ ಏಷ್ಯಾದಾದ್ಯಂತದ ದೇಶಗಳಿಗೆ ಸ್ವೀಕಾರಾರ್ಹವಾದ ಒಪ್ಪಂದವನ್ನು ಶೀಘ್ರದಲ್ಲೇ ತಲುಪಬಹುದು ಎಂದು ಅಮೆರಿಕ ಅಧ್ಯಕ್ಷರು ಹೇಳಿದ್ದಾರೆ. ಪ್ರಸ್ತಾವಿತ ಒಪ್ಪಂದವು ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿಲ್ಲ ಎಂದು ಖಚಿತಪಡಿಸುತ್ತದೆ ಎಂದು ಅವರು ಹೇಳಿದರು. ಆದಾಗ್ಯೂ, ಮಾತುಕತೆಗಳು ವಿಫಲವಾದರೆ ಅಲ್ಪಾವಧಿಯಲ್ಲಿ ಇರಾನ್ ಮೇಲೆ ದೊಡ್ಡ ಪ್ರಮಾಣದ ದಾಳಿಯನ್ನು ಪ್ರಾರಂಭಿಸಲು ಯುಎಸ್ ಮಿಲಿಟರಿ ಸಿದ್ಧವಾಗಿದೆ ಎಂದು ಅಧ್ಯಕ್ಷ ಟ್ರಂಪ್ ಎಚ್ಚರಿಸಿದ್ದಾರೆ. ಅಗತ್ಯವಿದ್ದರೆ ತಕ್ಷಣದ ಕ್ರಮಕ್ಕೆ ಸಿದ್ಧರಾಗಿರುವಂತೆ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್, ಜಂಟಿ ಮುಖ್ಯಸ್ಥರ ಅಧ್ಯಕ್ಷ ಜನರಲ್ ಡೇನಿಯಲ್ ಕೇನ್ ಮತ್ತು ಯುಎಸ್ ಮಿಲಿಟರಿಗೆ ಸೂಚನೆ ನೀಡಿದ್ದೇನೆ ಎಂದು ಅವರು ತಿಳಿಸಿದ್ದಾರೆ.

<><><>

ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೊವಾಲ್, ನವದೆಹಲಿಯಲ್ಲಿ ದೇಶದಲ್ಲಿ ಬಹು ನಿರೀಕ್ಷಿತ ವಾಟರ್ ಮೆಟ್ರೋ ಸೇವೆಗಳ ಆರಂಭದ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ೧೮ ನಗರಗಳಲ್ಲಿ ವಾಟರ್ ಮೆಟ್ರೋ ಸೇವೆಗಳನ್ನು ಪ್ರಾರಂಭಿಸುವ ಯೋಜನೆಯನ್ನು ಕೇಂದ್ರವು ಮುಂದಿಟ್ಟಿದೆ, ಮೊದಲ ಹಂತಕ್ಕೆ ಗುವಾಹಟಿಯನ್ನು ಗುರುತಿಸಲಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು. ಶ್ರೀನಗರ, ಪಾಟ್ನಾ, ವಾರಣಾಸಿ, ಅಯೋಧ್ಯೆ ಮತ್ತು ಪ್ರಯಾಗರಾಜ್ ಸೇರಿದಂತೆ ನಗರಗಳು ಸಹ ಮೊದಲ ಹಂತದ ಭಾಗವಾಗಿದ್ದರೆ, ಅಸ್ಸಾಂನ ತೇಜ್ಪುರ ಮತ್ತು ದಿಬ್ರುಗಢವನ್ನು ಯೋಜನೆಯ ಎರಡನೇ ಹಂತಕ್ಕೆ ಪ್ರಸ್ತಾಪಿಸಲಾಗಿದೆ. ಸಚಿವಾಲಯವು ಏಕಕಾಲದಲ್ಲಿ ಕರಡು ರಾಷ್ಟ್ರೀಯ ಜಲ ಮೆಟ್ರೋ ನೀತಿ, ೨೦೨೬ ಅನ್ನು ಅಂತರ-ಸಚಿವಾಲಯ ಸಮಾಲೋಚನೆಗಳಿಗಾಗಿ ವಿತರಿಸಿದೆ, ಇದು ನಗರ ಜಲ ಸಾರಿಗೆಗಾಗಿ ರಾಷ್ಟ್ರೀಯ ಚೌಕಟ್ಟನ್ನು ಔಪಚಾರಿಕಗೊಳಿಸುವ ಪ್ರಯತ್ನವನ್ನು ಸೂಚಿಸುತ್ತದೆ. ಉದ್ದೇಶಿತ ಜಾರಿ ಒಳನಾಡು ಜಲಮಾರ್ಗಗಳನ್ನು ದಕ್ಷ, ಸುಸ್ಥಿರ ಮತ್ತು ಆಧುನಿಕ ಸಾರ್ವಜನಿಕ ಸಾರಿಗೆ ಕಾರಿಡಾರ್ ಗಳಾಗಿ ಪರಿವರ್ತಿಸುವ ಗುರಿಯನ್ನು ಹೊಂದಿದೆ.

<><><>

ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ವಿರುದ್ಧದ ಆರೋಪಗಳ ತನಿಖೆ ನಡೆಸುತ್ತಿರುವ ನ್ಯಾಯಾಧೀಶರ ತನಿಖಾ ಸಮಿತಿ ತನ್ನ ವರದಿಯನ್ನು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಸಂಸತ್ ಭವನದಲ್ಲಿ ಸಲ್ಲಿಸಿದೆ. ನ್ಯಾಯಾಧೀಶರ (ವಿಚಾರಣೆ) ಕಾಯ್ದೆ, ೧೯೬೮ ರ ಅಡಿಯಲ್ಲಿ ಶಾಸನಬದ್ಧ ಅವಶ್ಯಕತೆಗಳಿಗೆ ಅನುಗುಣವಾಗಿ ಇದನ್ನು ಪ್ರಸ್ತುತಪಡಿಸಲಾಯಿತು. ಈ ವರದಿಯನ್ನು ಸಂಸತ್ತಿನ ಉಭಯ ಸದನಗಳಲ್ಲಿ ಸೂಕ್ತ ಸಮಯದಲ್ಲಿ ಮಂಡಿಸಲಾಗುತ್ತದೆ. ಕಳೆದ ವರ್ಷ ಆಗಸ್ಟ್ ೧೨ ರಂದು ಲೋಕಸಭಾ ಸ್ಪೀಕರ್ ಅವರು ಈ ಸಮಿತಿಯನ್ನು ರಚಿಸಿದ್ದರು. ನ್ಯಾಯಾಧೀಶರ ತನಿಖಾ ಸಮಿತಿಯ ಅಧ್ಯಕ್ಷ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ಅರವಿಂದ ಕುಮಾರ್, ಬಾಂಬೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಶ್ರೀ ಚಂದ್ರಶೇಖರ್ ಮತ್ತು ಕರ್ನಾಟಕ ಹೈಕೋರ್ಟ್ ನ  ಹಿರಿಯ ವಕೀಲ ಬಿ.ವಿ.ಆಚಾರ್ಯ ಅವರು ನ್ಯಾಯಾಧೀಶರ ತನಿಖಾ ಸಮಿತಿಯ ವರದಿಯನ್ನುಓಂ ಬಿರ್ಲಾ ಅವರಿಗೆ ಸಲ್ಲಿಸಿದರು.

<><><>

ಚೆನ್ನೈನ ಎಂ.ಎ.ಚಿದಂಬರಮ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ, ಸನ್‌ರೈಸರ್ಸ್ ಹೈದರಾಬಾದ್ ತಂಡವು ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಐದು ವಿಕೆಟ್‌ಗಳ ಜಯ ಸಾಧಿಸಿತು. ಈ ಮೂಲಕ ಪ್ಲೇ - ಆಫ್‌ಗೆ ಅರ್ಹತೆ ಪಡೆದುಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಚೆನ್ನೈ ಸೂಪರ್ ಕಿಂಗ್ಸ್ ತಂಡವು ೨೦ ಓವರ್‌ಗಳಲ್ಲಿ ಏಳು ವಿಕೆಟ್‌ಗಳಿಗೆ ೧೮೦ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಸನ್‌ರೈಸರ್ಸ್ ಹೈದರಾಬಾದ್ ಇಶಾನ್ ಕಿಶನ್ ಅವರ ೭೦ ರನ್‌ಗಳ ಸಹಾಯದಿಂದ ೧೯ ಓವರ್‌ಗಳಲ್ಲಿ ಐದು ವಿಕೆಟ್‌ಗಳನ್ನು ಕಳೆದುಕೊಂಡು ಗೆಲುವಿನ ನಗೆ ಬೀರಿತು. ಈ ಮೂಲಕ ಸನ್‌ರೈಸರ್ಸ್ ಹೈದರಾಬಾದ್ ತಂಡವು ೧೬ ಅಂಕಗಳನ್ನು ಹೊಂದಿದ್ದು  ಪ್ಲೇ - ಆಫ್‌ಗೆ ಪ್ರವೇಶ ಪಡೆಯಿತು. ಇದಕ್ಕೂ ಮೊದಲು ಗುಜರಾತ್ ಟೈಟಾನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಈಗಾಗಲೇ ಪ್ಲೇ-ಆಫ್‌ನಲ್ಲಿ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಂಡಿವೆ. ಉಳಿದಿರುವ ಒಂದು ಸ್ಥಾನಕ್ಕಾಗಿ ಐದು ತಂಡಗಳಿಂದ ಪೈಪೋಟಿ ಏರ್ಪಟ್ಟಿದೆ. ಜೈಪುರದಲ್ಲಿ ನಡೆಯಲಿರುವ ಇಂದಿನ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್, ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ಎದುರಿಸಲಿದೆ. ಪಂದ್ಯವು ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

<><><>

ಮಹಾರಾಷ್ಟ್ರದ ರಾಜ್ಯಪಾಲರಾದ ಜಿಷ್ಣು ದೇವ್ ವರ್ಮಾ ನಿನ್ನೆ ಮುಂಬೈನ ಪಿ.ಎಲ್.ದೇಶಪಾಂಡೆ ಅಕಾಡೆಮಿಯಲ್ಲಿ ಆಯೋಜಿಸಲಾಗಿದ್ದ ಮರಗೆಲಸದ ಪ್ರದರ್ಶನಕ್ಕೆ ಭೇಟಿ ನೀಡಿದ್ದರು. ಈ ಪ್ರದರ್ಶನದಲ್ಲಿ ಶಂಕರಬಾಬಾ ಪಾಪಲ್ಕರ್ ಅವರು ನಡೆಸುತ್ತಿರುವ ಆಶ್ರಯ ಧಾಮದಲ್ಲಿ ವಾಸಿಸುತ್ತಿರುವ, ವಿಶೇಷಚೇತನ ಯುವ ಕಲಾವಿದರು ರಚಿಸಿದ ಅತ್ಯಂತ ಜಿಜ್ಞಾಸೆಯ ಮರದ ಶಿಲ್ಪಗಳು ಮತ್ತು ಕಲಾತ್ಮಕ ಕೃತಿಗಳನ್ನು ಪ್ರದರ್ಶಿಸಲಾಗಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>